14) ಅರಗ ಜ್ಞಾನೇಂದ್ರ

15) ಚಂದ್ರಕಾಂತ್ ಬೆಲ್ಲದ್

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

4. ಚುಕ್ಕೆ ಗುರ್ತಿನ ಹಾಗೂ ಚುಕ್ಕೆ ಗುರ್ತಿಲ್ಲದ ಪ್ರಶ್ನೋತ್ತರಗಳ ಮಂಡನೆ

ಶ್ರೀ ಎಂ.ಸಿ.ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರ ಹಾಗೂ ವಾರ್ತಾ ಮತ್ತು ಪ್ರಚಾರ ಇಲಾಖಾ ಸಚಿವರು): ದಿನಾಂಕ 6ನೇ ನವೆಂಬರ್ 1998ರಂದು ಪ್ರಶ್ನೋತ್ತರಗಳು ನಡೆಯದ ಕಾರಣ ಆದಿನ 37ನೇಯ ಪಟ್ಟಿಯ 15 ಚುಕ್ಕೆ ಗುರುತಿನ ಪ್ರಶ್ನೆಗಳ ಪೈಕಿ 12 ಪ್ರಶ್ನೆಗಳಿಗೆ ಉತ್ತರಗಳನ್ನು ಹಾಗೂ ಲಿಖಿತ ಮೂಲಕ ಉತ್ತರಿಸುವ 37ನೇ ಪಟ್ಟಿಯ 124 ಪ್ರಶ್ನೆಗಳ ಪೈಕಿ 84 ಪ್ರಶ್ನೆಗಳಿಗೆ ಉತ್ತರಗಳನ್ನು ಸದನದ ಮುಂದಿಡುತ್ತೇನೆ. ಈ ದಿವಸ 38ನೇ ಪಟ್ಟಿಯ 15 ಪ್ರಶ್ನೆಗಳಿಗೆ 14 ಪ್ರಶ್ನೆಗಳಿಗೆ ಉತ್ತರಗಳನ್ನು, ಲಿಖಿತ ಮೂಲಕ ಉತ್ತರಿಸುವ 38ನೆ ಪಟ್ಟಿಯ 84 ಪ್ರಶ್ನೆಗಳ ಪೈಕಿ 70 ಪ್ರಶ್ನೆಗಳಿಗೆ ಉತ್ತರವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ದಿನಾಂಕ 6.11.98ರ ಚುಕ್ಕೆಗುರುತಿನ ಪ್ರಶ್ನೋತ್ತರಗಳು.

ಮೈಸೂರು ನಗರದ ನಾಯ್ಡು ನಗರದ ಬಸ್ ನಿಲ್ದಾಣ ನಿರ್ಮಾಣ.

534: (3845)

ಶ್ರೀ ಇ.ಮಾರುತಿರಾವ್ ಪವಾರ್ (ನರಸಿಂಹರಾಜ): ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರು ನಗರದ ನಾಯ್ಡು ನಗರ (ಗಜೇಂದ್ರ ನಗರ)ದಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ವತಿಯಿಂದ ಬಸ್ ನಿಲ್ದಾಣಕ್ಕೆ ಶಂಕು ಸ್ಥಾಪನೆ ನೆರೆವೇರಿಸಿದ್ದರೂ ಸಹ ಯಾವುದೇ ಪ್ರಗತಿ ಕಾಣದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಮೇಲ್ಕಂಡ ನಿಲ್ದಾಣದ ಬಗ್ಗೆ ಟೆಂಡರ್ ಕರೆಯಲಾಗಿದೆಯೇ; ಹಾಗಿದ್ದಲ್ಲಿ ಈ ಕಾಮಗಾರಿಯನ್ನು ಯಾವ ಗುತ್ತಿಗೆದಾರರಿಗೆ ನೀಡಲಾಗಿದೆ; ಶಂಕುಸ್ಥಾಪನೆಯಾಗಿದ್ದರೂ

ಕಾಮಗಾರಿ ವಿಳಂಬವಾಗಲು ಕಾರಣವೇನು?

ಇ) ಈ ಕಾಮಗಾರಿ ಪ್ರಾರಂಭ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

ಶ್ರೀ ಪಿ.ಜಿ.ಆರ್. ಸಿಂಧ್ಯ (ಸಾರಿಗೆ ಸಚಿವರು):

ಅ) ಶಂಕು ಸ್ಥಾಪನೆಯನ್ನು ದಿನಾಂಕ: 1-9-98ರಂದು ನೆರವೇರಿಸಲಾಗಿದೆ. ಮುಂದಿನ ಕ್ರಮ ಕೈಗೊಂಡು ಪ್ರಗತಿ ಸಾಧಿಸಲಾಗುವುದು.

ಆ) ಟೆಂಡರ್ ಕರೆದಿರುವುದಿಲ್ಲ. ಟೆಂಡರ್ ಕರೆದು ಗುತ್ತಿಗೆದಾರರನ್ನು ನೇಮಿಸಿ ಕೆಲಸವನ್ನು ಪ್ರಾರಂಭಿಸಲಾಗುವುದು.

ಇ) ಪ್ರಸ್ತುತ ಸದರಿ ಕೆಲಸಕ್ಕೆ ಮೊತ್ತ 9 ಲಕ್ಷ ರೂಪಾಯಿಗಳಿಗೆ ಮಂಜೂರಾತಿ ನೀಡಲಾಗಿದ್ದು, ಟಂಡರ್ ಆಧಾರದ ಮೇಲೆ ಕೆಲಸವನ್ನು ಕೈಗೊಳ್ಳಲಾಗುವುದು. ಟೆಂಡರ್‌ನ್ನು 10 ದಿನಗಳೊಳಗಾಗಿ ಕರೆಯಲಾಗುವುದು.

ಕೃಷಿ ಉತ್ಪನ್ನ ಮಾರುಕಟ್ಟೆ ಕಾಯ್ದೆಗೆ ತಿದ್ದುಪಡಿ.

535: (3840)

ಶ್ರೀ ಬಿ.ಎಸ್.ಯಡಿಯೂರಪ್ಪ (ಶಿಕಾರಿಪುರ): ಮಾನ್ಯ ಕೃಷಿ ಮಾರುಕಟ್ಟೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯ ಸರ್ಕಾರವು ಕೃಷಿ ಉತ್ಪನ್ನ ಮಾರುಕಟ್ಟೆ ಕಾಯ್ದೆ 1966ಕ್ಕೆ ತಿದ್ದುಪಡಿ ತರಲು ಮುಂದಾಗಿದೆಯೇ?

ಆ) ಈ ತಿದ್ದುಪಡಿಯಿಂದ ಅಡಿಕೆ ಬೆಳೆಗಾರರಿಗೆ ಹಾಗೂ ದಲ್ಲಾಲರಿಗೆ ಆಗುವ ತೊಂದರೆ ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ, ಇದಕ್ಕೆ ಸರ್ಕಾರ ಕೈಗೊಳ್ಳುವ ಪರಿಹಾರೋಪಾಯವೇನು?

ಶ್ರೀ ಹೆಚ್.ನಾಗಪ್ಪ (ಕೃಷಿ ಮಾರುಕಟ್ಟೆ ರಾಜ್ಯ ಸಚಿವರು):

ಅ) ಹೌದು.

ಆ) ಹೌದು.